# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2016-17ನೇ ಸಾಲಿನ ಮುಂದುವರೆದ ಯೋಜನಾ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಅನುದಾನ ಬಿಡುಗಡೆ ಮಾಡುವ ಕುರಿತು.

**ಓದಲಾಗಿದೆ:**

1) ಸರ್ಕಾರದ ಆದೇಶ ಸಂಖ್ಯೆ: ತೋಇ 75 ರೇಕೃವಿ 2016, ದಿನಾಂಕ 10-05-2016.

2) ರೇಷ್ಮೆ ಕೃಷಿ ಅಭಿವೃದ್ಧಿ ಆಯುಕ್ತರು ಹಾಗೂ ರೇಷ್ಮೆ ನಿರ್ದೇಶಕರ ಪತ್ರ ಸಂಖ್ಯೆ: ಯೋಜನೆ/ ಪಿಎಸ್1/ಮುಂ.ಯೋ ಅನುದಾನ/20/2016-17, ದಿನಾಂಕ 13/21-05-2016.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ: (1)ರ ದಿನಾಂಕ 10-05-2016ರ ಆದೇಶದಲ್ಲಿ 2016-17ನೇ ಸಾಲಿನ 06 ಮಾರ್ಪಾಡಿಲ್ಲದ ವಿವಿಧ ಕಾರ್ಯಕ್ರಮಗಳ ಯೋಜನೆಗಳನ್ನು 2016-17ನೇ ಸಾಲಿನಲ್ಲಿ ಮುಂದುವರೆಸಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (2)ರ ದಿನಾಂಕ 13/21-05-2016ರ ಪತ್ರದಲ್ಲಿ 2016-17ನೇ ಸಾಲಿನಲ್ಲಿ ಅನುಷ್ಠಾನಗೊಳಿಸುವ ಮುಂದುವರೆದ ಯೋಜನಾ ಕಾರ್ಯಕ್ರಮಗಳಿಗೆ ದಿನಾಂಕ 10-05-2016ರ ಸರ್ಕಾರದ ಆದೇಶದಲ್ಲಿ ಆಡಳಿತಾತ್ಮಕ ಮಂಜೂರಾತಿ ನೀಡಲಾಗಿರುತ್ತದೆ. ಆದ್ದರಿಂದ, ಮುಂದುವರೆದ ಯೋಜನಾ ಕಾರ್ಯಕ್ರಮಗಳನ್ನು ಕ್ಷೇತ್ರಮಟ್ಟದಲ್ಲಿ ಅನುಷ್ಠಾನಗೊಳಿಸಲು ಈ ಕೆಳಕಂಡಂತೆ ಮೊದಲ ಕಂತಿನ ಅನುದಾನವನ್ನು ಬಿಡುಗಡೆ ಮಾಡುವಂತೆ ರೇಷ್ಮೆ ಕೃಷಿ ಅಭಿವೃದ್ಧಿ ಆಯುಕ್ತರು ಹಾಗೂ ರೇಷ್ಮೆ ನಿರ್ದೇಶಕರು ಕೋರಿರುತ್ತಾರೆ.

(ರೂ. ಲಕ್ಷಗಳಲ್ಲಿ)

| ಕ್ರ. ಸಂ. | ಯೋಜನೆ ಮತ್ತು ಲೆಕ್ಕ ಶೀರ್ಷಿಕೆ | ಆಯವ್ಯಯ ಹಂಚಿಕೆ | ಮೊದಲ ಕಂತಾಗಿ ಬಿಡುಗಡೆ ಮಾಡಲು ಪ್ರಸ್ತಾಪಿಸಿರುವ ಅನುದಾನ |
|---|---|---|---|
| 1 | ರೇಷ್ಮೆ ಅಭಿವೃದ್ಧಿ ಯೋಜನೆ<br>2851-00-107-1-35 (106) | 3850.00 | 962.50 |
| 2 | ರೇಷ್ಮೆ ಕೃಷಿ ಅಭಿವೃದ್ಧಿಗೆ ನೂತನ ಕರ್ತೃತ್ವ ಶಕ್ತಿ ಮತ್ತು ಭಾಗೀದಾರರಿಗೆ ಸವಲತ್ತು - ಸಾಮಾನ್ಯ<br>2851-00-107-1-48 (106) | 8473.00 | 2118.25 |
| 3 | ಕರ್ನಾಟಕ ರೇಷ್ಮೆ ವ್ಯವಸಾಯ ಯೋಜನೆ<br>2851-00-107-1-80 (059)<br>2851-00-107-1-80 (ವೇತನಗಳು) | 4824.00<br>318.00 | 1206.00<br>79.50 |
| 4 | ಕಟ್ಟಡಗಳು - ಸಾಮಾನ್ಯ<br>4851-00-107-1-01 (139) | 160.00 | 40.00 |
| 5 | ರೇಷ್ಮೆ ಗೂಡು ಮಾರುಕಟ್ಟೆಗಳ ನಿರ್ಮಾಣ (ನಬಾರ್ಡ್)<br>4851-00-107-1-03 (436) | 859.00 | 214.75 |
| | ಒಟ್ಟು | 18484.00 | 4621.00 |

ರೇಷ್ಮೆ ಕೃಷಿ ಅಭಿವೃದ್ಧಿ ಆಯುಕ್ತರು ಹಾಗೂ ರೇಷ್ಮೆ ನಿರ್ದೇಶಕರ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದ್ದು, 2016-17 ನೇ ಸಾಲಿನ 05 ಮುಂದುವರೆದ ಯೋಜನಾ

ಪು.ತಿ.ನೋ. . . .

ಕಾರ್ಯಕ್ರಮಗಳನ್ನು ಕ್ಷೇತ್ರಮಟ್ಟದಲ್ಲಿ ಅನುಷ್ಠಾನಗೊಳಿಸಲು ಮೊದಲ ಕಂತಾಗಿ ರೂ. 4621.00 ಲಕ್ಷಗಳನ್ನು ಬಿಡುಗಡೆ ಮಾಡಲು ಸರ್ಕಾರವು ನಿರ್ಧರಿಸಿರುವ ಕಾರಣ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ : ತೋಇ 101 ರೇಕೃವಿ 2016,**
**ಬೆಂಗಳೂರು, ದಿನಾಂಕ: 10-06-2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ 2016-17 ನೇ ಸಾಲಿನ 05 ಮುಂದುವರೆದ ಯೋಜನಾ ಕಾರ್ಯಕ್ರಮಗಳನ್ನು ಕ್ಷೇತ್ರಮಟ್ಟದಲ್ಲಿ ಅನುಷ್ಠಾನಗೊಳಿಸಲು ಮೊದಲ ಕಂತಾಗಿ ರೂ. 4621.00 ಲಕ್ಷ (ನಾಲ್ಕು ಸಾವಿರದ ಆರನೂರ ಇಪ್ಪತ್ತೊಂದು ಲಕ್ಷ ರೂಪಾಯಿಗಳು ಮಾತ್ರ) ಗಳನ್ನು ಈ ಕೆಳಕಂಡ ಲೆಕ್ಕ ಶೀರ್ಷಿಕೆಗಳ ಎದುರಿಗೆ ತೋರಿಸಿರುವಂತೆ ಸರ್ಕಾರವು ಬಿಡುಗಡೆ ಮಾಡಿ ಆದೇಶಿಸಿದೆ.

(ರೂ. ಲಕ್ಷಗಳಲ್ಲಿ)

| ಕ್ರ. ಸಂ. | ಯೋಜನೆ ಮತ್ತು ಲೆಕ್ಕ ಶೀರ್ಷಿಕೆ | ಆಯವ್ಯಯ ಹಂಚಿಕೆ | ಮೊದಲ ಕಂತಾಗಿ ಬಿಡುಗಡೆ ಮಾಡುತ್ತಿರುವ ಅನುದಾನ |
|---|---|---|---|
| 1 | ರೇಷ್ಮೆ ಅಭಿವೃದ್ಧಿ ಯೋಜನೆ<br>2851-00-107-1-35 (106) | 3850.00 | 962.50 |
| 2 | ರೇಷ್ಮೆ ಕೃಷಿ ಅಭಿವೃದ್ಧಿಗೆ ನೂತನ ಕರ್ತೃತ್ವ ಶಕ್ತಿ ಮತ್ತು ಭಾಗೀದಾರರಿಗೆ ಸವಲತ್ತು - ಸಾಮಾನ್ಯ<br>2851-00-107-1-48 (106) | 8473.00 | 2118.25 |
| 3 | ಕರ್ನಾಟಕ ರೇಷ್ಮೆ ವ್ಯವಸಾಯ ಯೋಜನೆ<br>2851-00-107-1-80 (059)<br>2851-00-107-1-80 (ವೇತನಗಳು) | 4824.00<br>318.00 | 1206.00<br>79.50 |
| 4 | ಕಟ್ಟಡಗಳು - ಸಾಮಾನ್ಯ<br>4851-00-107-1-01 (139) | 160.00 | 40.00 |
| 5 | ರೇಷ್ಮೆ ಗೂಡು ಮಾರುಕಟ್ಟೆಗಳ ನಿರ್ಮಾಣ (ನಬಾರ್ಡ್)<br>4851-00-107-1-03 (436) | 859.00 | 214.75 |
| | **ಒಟ್ಟು** | **18484.00** | **4621.00** |

ಈ ವೆಚ್ಚವನ್ನು ಸಂಬಂಧಪಟ್ಟ ಲೆಕ್ಕ ಶೀರ್ಷಿಕೆಗಳಡಿ ಭರಿಸತಕ್ಕದ್ದು.

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಸಂಖ್ಯೆ: ತೋಇ 49 ಆಂಆಸ 2016, ದಿನಾಂಕ 26-05-2016 ರಲ್ಲಿ ನೀಡಿರುವ ಸಹಮತಿ ಮೇರೆಗೆ ಮತ್ತು ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 3 ಟಿಎಫ್‌ಪಿ 2016, ದಿನಾಂಕ 02-04-2016ರಲ್ಲಿ ಇಲಾಖಾ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಲಾಗಿರುವ ಆರ್ಥಿಕ ಅಧಿಕಾರದನ್ವಯ ಬಿಡುಗಡೆ ಮಾಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

ಆರ್. ಎಲ್. ಚಿನ್ನಮ್ಮ 10/6
(ಆರ್.ಎಲ್. ಚಿನ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ (ರೇಷ್ಮೆ)
ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ

ಇವರಿಗೆ:

1. ಮಹಾಲೇಖಪಾಲರು, (ಜಿ&ಎಸ್‌ಎಸ್‌ಎ)/(ಇ&ಆರ್‌ಎಸ್‌ಎ)/(ಎ&ಇ) ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.